(11)

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಾಸರಹಳ್ಳಿ ವಲಯ,

ಎಂ.ಇ.ಐ.ಬಡಾವಣೆ, ಬಾಗಲಗುಂಟೆ, ಹೆಸರಘಟ್ಟ ಮುಖ್ಯರಸ್ತೆ, ಬೆಂಗಳೂರು -560073.

ನಂ:ಮು.ಅ/ದಾವ/ತಾ.ಮ/01 /2014-15
2015-16

ಮುಖ್ಯ ಅಭಿಯಂತರವರ ಕಛೇರಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಾಸರಹಳ್ಳಿ ವಲಯ, ಬೆಂಗಳೂರು
ದಿನಾಂಕ:- 05/05/2015

ತಾಂತ್ರಿಕ ಮಂಜೂರಾತಿ

ಕಾಮಗಾರಿ ಹೆಸರು:- Drilling of 7 numbers of borewell and fixing of pump motor and necessary accessaries at shetyhalli and Abbigere, in different locations, ward no.12 in Shetyhalli Subdivision.

ಅಂದಾಜು ಮೆಚ್ಚ : 50.00 ಲಕ್ಷಗಳು P-Code: 1802

ಜಾಬ್ ಕೋಡ್: 012-15-000021

ಉಲ್ಲೇಖ ಸಂಖ್ಯೆ:-1)ಮಾನ್ಯ ಆಯುಕ್ತರವರು ನೀಡಿರುವ ಅಧಿಕಾರ ಪ್ರತ್ಯಾಯೋಜನೆ ಕಛೇರಿ ಆದೇಶ (ತಿದ್ದುಪಡಿ ಅಧಿಕಾರ ಪ್ರತ್ಯಾಯೋಜನೆ ನಡವಳಿಗಳು) ಪತ್ರ ಸಂ: ಬಿ12(1)ಪಿಆರ್/394/11-12, ದಿ:-02/09/2014.

2) ಮಾನ್ಯ ಅಪರ ಆಯುಕ್ತರು, (ದಾಸರಹಳ್ಳಿ ವಲಯ) ರವರ ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ: ಅ.ಆ/ದಾ.ವ/ಆ.ಮ/0/2015-16, ದಿನಾಂಕ:17-04-2015.

****

ಮೇಲಿನ ವಿಷಯದಲ್ಲಿ ತಿಳಿಸಿರುವ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗದವರು ತಾಂತ್ರಿಕ ಮಂಜೂರಾತಿಯನ್ನು ಕೋರಿರುವ ಮೇರೆಗೆ, ಉಲ್ಲೇಖ (2)ರಲ್ಲಿಯ ಅನುಮೋದನೆ ಮೇರೆಗೆ ಸದರಿ ಕಾಮಗಾರಿಯ ಅಂದಾಜು ಮೊತ್ತ ರೂ. 50.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ಅಪರ ಆಯುಕ್ತರು ದಾಸರಹಳ್ಳಿ ವಲಯ ಇವರು ನೀಡಿರುತ್ತಾರೆ. ಅದರಂತೆ ಸದರಿ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು (ವಿದ್ಯುತ್)ರವರು ತಾಂತ್ರಿಕ ಮಂಜೂರಾತಿಗೆ ಸಲ್ಲಿಸಿರುವ ಅಂದಾಜು ಪಟ್ಟಿಯ ಮೊತ್ತ ರೂ. 50.00 (ರೂ ಐವತ್ತು ಲಕ್ಷಗಳು ಮಾತ್ರ) ಲಕ್ಷಗಳಿಗೆ ತಾಂತ್ರಿಕ ಮಂಜೂರಾತಿ ನೀಡಲಾಗಿದೆ ಮತ್ತು ತಾಂತ್ರಿಕ ಮಂಜೂರಾತಿಯ ಪುಸ್ತಕದ ಪುಟ ಸಂಖ್ಯೆ: 81 ಕ್ರಮ ಸಂಖ್ಯೆ: 01 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.
2015-16

ಷರತ್ತುಗಳು:

1.ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
2.ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಶನ್ ಕರೆದು ಅನುಮೊದನೆ ಪಡೆಯುವುದು.
3.ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4.ರಸ್ತೆ ಇತಿಹಾಸ ಪುಸ್ತಕದಲ್ಲಿ ಸದರಿ ಕಾಮಗಾರಿಯಲ್ಲಿನ ವಿವಿಧ ಕೆಲಸಗಳ ವಿವರಗಳನ್ನು ಸಮೂದಿಸುವುದು

ಮುಖ್ಯ ಅಭಿಯಂತರರು-
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಾಸರಹಳ್ಳಿ ವಲಯ, ಬೆಂಗಳೂರು
5/5/15

ಪ್ರತಿಯನ್ನು ಮಾಹಿತಿಗಾಗಿ ಸಲ್ಲಿಸಿದೆ:-

1. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ದಾಸರಹಳ್ಳಿ ವಲಯ ಬೆಂಗಳೂರು. ಮೂಲ ಅಂದಾಜು ಪಟ್ಟಿಯೊಂದಿಗೆ ಮುಂದಿನ ಕ್ರಮಕ್ಕಾಗಿ.
2. ಸಹಾಯಕ ಹಣಕಾಸು ನಿಯಂತ್ರಕರು, ದಾಸರಹಳ್ಳಿ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
3. ಕಛೇರಿ ಪ್ರತಿ.